ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1555**

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸಬೇಕಾದ ದಿನಾಂಕ : 11-03-2022

ಕ್ರ. ಸಂ.	ಪ್ರಶ್ನೆ	ಉತ್ತರ
ಅ.	ರಾಜ್ಯದಲ್ಲಿ ವಾಹನ ಫಿಟ್‌ನೆಸ್‌ಗೆ ಹೈಟೆಕ್ ವ್ಯವಸ್ಥೆ ಮಾಡಲು ಯೋಜಿಸಲಾಗಿದೆಯೇ;	ಹೌದು
ಆ.	ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಯಾವ ಯಾವ ಆರ್.ಟಿ.ಓ ಕಛೇರಿಗಳನ್ನು ಗುರುತಿಸಲಾಗಿದೆ;	ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಹಂತ ಹಂತವಾಗಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿನ ಆರ್.ಟಿ.ಓ ಕಛೇರಿಗಳಲ್ಲಿ ವಾಹನ ತಪಾಸಣಾ ಮತ್ತು ಪ್ರಮಾಣೀಕರಣ ಕೇಂದ್ರ ಸ್ಥಾಪಿಸಲು ಉದ್ದೇಶಿಸಲಾಗಿದೆ. ಪ್ರಸ್ತುತ ನೆಲಮಂಗಲ, ಮೈಸೂರು ಮತ್ತು ಧಾರವಾಡದಲ್ಲಿ ವಾಹನ ತಪಾಸಣಾ ಮತ್ತು ಪ್ರಮಾಣೀಕರಣ ಕೇಂದ್ರಗಳನ್ನು ಸ್ಥಾಪಿಸಿ ಕಾರ್ಯಾಚರಣೆಗೊಳಿಸಲಾಗಿದೆ. 2022-23ನೇ ಸಾಲಿನಲ್ಲಿ ಜ್ಞಾನಭಾರತಿ, ದೇವನಹಳ್ಳಿ, ಶಿವಮೊಗ್ಗ, ಬಳ್ಳಾರಿ ಬಾಗಲಕೋಟೆ, ಮಂಗಳೂರು, ವಿಜಯನಗರ (ಹೊಸಪೇಟೆ) ಮತ್ತು ವಿಜಯಪುರಗಳಲ್ಲಿ ವಾಹನ ತಪಾಸಣಾ ಮತ್ತು ಪ್ರಮಾಣೀಕರಣ ಕೇಂದ್ರಗಳನ್ನು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರದ ವತಿಯಿಂದ ಅನುಷ್ಠಾನಗೊಳಿಸಲು ಪ್ರಸ್ತಾಪಿಸಲಾಗಿದೆ.
ಇ.	ಬೆಂಗಳೂರಿನಲ್ಲಿ ಅತ್ಯಧಿಕ ವಾಹನಗಳು ಇದ್ದರೂ ಸಹ ಯಾವುದೇ ವಾಹನ ತಪಾಸಣೆ ಮತ್ತು ಪ್ರಮಾಣಿಕರಣ ಕೇಂದ್ರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಂಗಳೂರಿನ ನೆಲಮಂಗಲ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ ವ್ಯಾಪ್ತಿಯಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರವನ್ನು ಕಾರ್ಯಾಚರಣೆಗೊಳಿಸಲಾಗಿದೆ. ಬೆಂಗಳೂರಿನ ಚೊಕ್ಕನಹಳ್ಳಿಯಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರವನ್ನು ನಿರ್ಮಿಸಲಾಗುತ್ತಿದೆ.

ಈ.	ಬೆಂಗಳೂರಿನಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರ ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಎಲ್ಲಾ ತಪಾಸಣೆ ಕೇಂದ್ರಗಳಿಗೆ ತಗಲುವ ವೆಚ್ಚ ಎಷ್ಟು? (ವಿವರ ನೀಡುವುದು)	2022-23 ರಲ್ಲಿ ಬೆಂಗಳೂರಿನ ಜ್ಞಾನಭಾರತಿ ಮತ್ತು ದೇವನಹಳ್ಳಿಯಲ್ಲಿ ವಾಹನ ತಪಾಸಣೆ ಮತ್ತು ಪ್ರಮಾಣೀಕರಣ ಕೇಂದ್ರ ಸ್ಥಾಪಿಸಲು ಪ್ರಸ್ತಾಪಿಸಲಾಗಿದೆ. ಒಂದು ತಪಾಸಣಾ ಕೇಂದ್ರಕ್ಕೆ ಸರಿಸುಮಾರು 15.00 ಕೋಟಿಗಳಂತೆ, ಇನ್ನೂ ನಿರ್ಮಿಸಲು ಉದ್ದೇಶಿಸಿರುವ 28 ಕೇಂದ್ರಗಳಿಗೆ ರೂ.420.00 ಕೋಟಿಗಳಾಗುತ್ತದೆ ಎಂದು ಅಂದಾಜಿಸಲಾಗಿದೆ.

ಟಿಡಿ 32 ಟಿಡಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ
ಪಂಗಡಗಳ ಕಲ್ಯಾಣ ಸಚಿವರು